## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬಳ್ಳಾರಿ ಜಿಲ್ಲೆ, ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ದಶಮಾಪುರ ಮತ್ತು ಇತರೆ 28 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಟೆಂಡರ್ ಕಾಮಗಾರಿಯ Variations ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಬೆಂಗಳೂರುರವರ ಕಡತ ಸಂಖ್ಯೆ:ಗ್ರಾಅಪ/821/ಗ್ರಾಕುನೀ&ನೈಇ/2016.
2. ದಿನಾಂಕ:29.09.2021ರಂದು ನಡೆದ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳ Variation & EOT ಪ್ರಾಧಿಕಾರ ಸಭೆಯ ನಡವಳಿಗಳು.

---

**ಪೀಠಿಕೆ:**

ಬಳ್ಳಾರಿ ಜಿಲ್ಲೆ, ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ದಶಮಾಪುರ ಮತ್ತು ಇತರೆ 28 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಕಾಮಗಾರಿಯ ಟೆಂಡರ್ ಐಟಂಗಳ ಪ್ರಮಾಣಗಳಿಗಿಂತ ಹೆಚ್ಚುವರಿ ಅನುಷ್ಠಾನ ಹಾಗೂ ಟೆಂಡರ್‌ನಲ್ಲಿ ಇಲ್ಲದಿರುವ ಹೊಸ ಐಟಂಗಳನ್ನು ಸೇರ್ಪಡೆಗೊಳಿಸಿ ಅನುಷ್ಠಾನಗೊಳಿಸಿರುವುದರಿಂದ ಅಂದಾಜು ಮೊತ್ತ **ರೂ.2869.66ಲಕ್ಷ** ಪರಿಷ್ಕೃತವಾಗಿರುತ್ತದೆ.

ದಿನಾಂಕ:29.09.2021ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರ ಅಧ್ಯಕ್ಷತೆಯಲ್ಲಿ ನಡೆದ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಟೆಂಡರ್ ಕಾಮಗಾರಿಗಳ Variation in tender items and in new items & EOT ಪ್ರಾಧಿಕಾರ ಸಭೆಯ ನಿರ್ಣಯದಂತೆ ಈ ಯೋಜನೆಯ ಪರಿಷ್ಕೃತ ಅಂದಾಜು ಮೊತ್ತಕ್ಕೆ ಮೇಲೆ ಓದಲಾದ (1)ರ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಬೆಂಗಳೂರುರವರ ಕಡತದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ಕೋರಿರುತ್ತಾರೆ.

ಚಾಲ್ತಿ ಪಾರದರ್ಶಕ ನಿಯಮಾನುಸಾರ **ಬಳ್ಳಾರಿ / ವಿಜಯನಗರ** ಜಿಲ್ಲಾ ಪಂಚಾಯತ್ ಹಾಗೂ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರುರವರು ಮುಂದಿನ ಪ್ರಕ್ರಿಯೆಯನ್ನು ಅನುಸರಿಸಲು ಅನುವಾಗುವಂತೆ 2215-ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ (2215-MVS) ಕಾರ್ಯಕ್ರಮದ ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಕುನೀ&ನೈಇ/362/ಗ್ರಾನೀಸ(4)2021 ಬೆಂಗಳೂರು, ದಿನಾಂಕ:30.12.2021.** 1134

ಪೀಠಿಕೆಯಲ್ಲಿನ ಅಂಶಗಳ ಹಿನ್ನೆಲೆಯಲ್ಲಿ, ಬಳ್ಳಾರಿ ಜಿಲ್ಲೆ, ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ದಶಮಾಪುರ ಮತ್ತು ಇತರೆ 28 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಪರಿಷ್ಕೃತ ಅಂದಾಜು ಮೊತ್ತ **ರೂ.2869.66ಲಕ್ಷ (ಎರಡು ಸಾವಿರದ ಎಂಟು ನೂರ ಅರವತ್ತೊಂಭತ್ತು ಲಕ್ಷದ ಅರವತ್ತಾರು ಸಾವಿರ ರೂಪಾಯಿಗಳು ಮಾತ್ರ)** ಗಳಿಗೆ 2215-ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ (2215-MVS) ಕಾರ್ಯಕ್ರಮದ ಅಡಿಯಲ್ಲಿ **ಆಡಳಿತಾತ್ಮಕ** ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

30/12

2. ಈ ಆದೇಶದಲ್ಲಿ ಅನುಮೋದನೆಯಾಗಿರುವ ಯೋಜನೆಯ ಪರಿಷ್ಕೃತ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಬೆಂಗಳೂರು ರವರ ಶಿಫಾರಸ್ಸು ಆಧರಿಸಿ ಅನುದಾನ ಬಿಡುಗಡೆಯಾಗತಕ್ಕದ್ದು ಹಾಗೂ ಸದರಿ ವೆಚ್ಚವನ್ನು 2022-23ರ ಸಾಲಿನ IMISನಲ್ಲಿ ಅಳವಡಿಸಲು ಸೂಚಿಸಿದೆ.

3. ಗುತ್ತಿಗೆದಾರರು ಕಾಮಗಾರಿಗಳನ್ನು ಉತ್ತಮ ಗುಣಮಟ್ಟದಲ್ಲಿ ಮತ್ತು ನಿಗದಿತ ಅವಧಿಯೊಳಗೆ ಕಾರ್ಯಗತಗೊಳಿಸಿ ಪೂರ್ಣಗೊಳಿಸಬೇಕು. ತದನಂತರ 5 ವರ್ಷಗಳ ಕಾಲ ಸದರಿ ಯೋಜನೆಗಳ ಸಂಪೂರ್ಣ ನಿರ್ವಹಣೆ ಮತ್ತು ಕಾರ್ಯಾಚರಣೆಯನ್ನು (O&M) ಸದರಿ ಸಂಸ್ಥೆಯೇ ನಿರ್ವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ (ಅಭಿವೃದ್ಧಿ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಬಳ್ಳಾರಿ / ವಿಜಯನಗರ ಜಿಲ್ಲೆ.**
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾ.ಅ. &. ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಆಯುಕ್ತರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
7. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
8. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು
9. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, **ಬಳ್ಳಾರಿ / ವಿಜಯನಗರ ಜಿಲ್ಲೆ.**
10. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ ಕಛೇರಿ, **ಕಲಬುರಗಿ.**
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. &. ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
12. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ, "ಕರ್ನಾಟಕ ವಿಕಾಸ", ಗ್ರಾ.ಅ.&ಪಂ.ರಾಜ್ ಇಲಾಖೆ, ಬೆಂಗಳೂರು.
13. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&ನೈ.ಇ., ಕಾವೇರಿ ಭವನ, ಬೆಂಗಳೂರು.
14. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ಹರಪನಹಳ್ಳಿ.**
15. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ. &. ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು). ಬಹುಮಹಡಿ ಕಟ್ಟಡ, ಬೆಂಗಳೂರು.
16. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ), ಬೆಂಗಳೂರು.
17. ಗ್ರಾ.ಅ. &. ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು), ಬಹುಮಹಡಿ ಕಟ್ಟಡ, ಬೆಂಗಳೂರು.
18. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.